ವಿಷಯ : ಸೂಳ್ಯಕ್ಷೇತ್ರದ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿರತಕ್ಕ ಖಾಲಿ ಹುದ್ದೆಗಳ ಭರ್ತಿ.

1362(1852)-ಶ್ರೀ ಎಸ್. ಅಂಗಾರ (ಸುಳ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸುಳ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಒಟ್ಟು ಎಷ್ಟು ಸಮುದಾಯ ಆರೋಗ್ಯ ಕೇಂದ್ರಗಳಿವೆ? ಮತ್ತು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ?

ಆ) ಅವುಗಳಲ್ಲಿ ಒಟ್ಟು ಎಷ್ಟು ವೈದ್ಯರ ಅವಶ್ಯಕತೆಯಿದೆ? ಎಷ್ಟು ವೈದ್ಯ ನೇಮಕ ಮಾಡಿದೆ? (ವಿವರ ನೀಡುವುದು)

ಇ) ಸೂಳ್ಯ ಕ್ಷೇತ್ರದಲ್ಲಿ ಎಲ್ಲಾ ಆರೋಗ್ಯ ಕೇಂದ್ರಗಳಿಗೆ ಎಷ್ಟು ದಾದಿಯರ ಹುದ್ದೆಗಳು ನೇಮಕಾತಿ ನಡೆದಿವೆ? ಎಷ್ಟು ಹುದ್ದೆಗಳು ಖಾಲಿ ಇವೆ. ಖಾಲಿಯಿರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಿಲಾಗುವುದು?

ಡಾ. ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ

1. ಸಮುದಾಯ ಆರೋಗ್ಯ ಕೇಂದ್ರ	1
2. ಪ್ರಾಥಮಿಕ ಆರೋಗ್ಯ ಕೇಂದ್ರಗಳು	5
3. ಪ್ರಾಥಮಿಕ ಆರೋಗ್ಯ ಘಟಕ	1
4. ಸಂಚಾರಿ ಗಿರಿಜನ ಆರೋಗ್ಯ ಘಟಕ	1

ಆ) ಇವುಗಳಿಗೆ 10 ವೈದ್ಯರ ಹುದ್ದೆಗಳು ಮಂಜೂರಾಗಿವೆ. ಈ ಹುದ್ದೆಗಳಲ್ಲಿ ವೈದ್ಯರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. 4 ಹುದ್ದೆಗಳು ಖಾಲಿಯಿರುತ್ತವೆ.

ಇ) ಸುಳ್ಯ ಕ್ಷೇತ್ರದಲ್ಲಿ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಒಟ್ಟು 7 ದಾದಿಯರ ಹುದ್ದೆಗಳು ಮಂಜೂರಾಗಿದೆ. ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಹುದ್ದೆಗಳೆಂಬ ಯಾವುದೂ ಖಾಲಿಯಿರುವುದಿಲ್ಲವಾದ್ದರಿಂದ ಯಾವಾಗ ಭರ್ತಿ ಮಾಡಬೇಕೆಂಬ ಪ್ರಶ್ನೆ ಉದ್ಭವಿಸುವುದಿಲ್ಲ.